# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತಮೂರನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಸೋಮವಾರ, ದಿನಾಂಕ: 01ನೇ ಫೆಬ್ರವರಿ, 2021**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

### 02. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲೆ ಚರ್ಚೆ

**ಶ್ರೀಯುತರುಗಳಾದ:**
ಎಸ್.ಆರ್.ಪಾಟೀಲ್ ಮಾನ್ಯ ವಿರೋಧ ಪಕ್ಷದ ನಾಯಕರು, ಎಂ.ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಕೆ.ಸಿ.ಕೊಂಡಯ್ಯ, ಆರ್.ಬಿ.ತಿಮ್ಮಾಪುರ, ಬಿ.ಕೆ. ಹರಿಪ್ರಸಾದ್, ವಿಜಯ ಸಿಂಗ್ ಆರ್. ಪ್ರಸನ್ನ ಕುಮಾರ್ ಹಾಗೂ ಇತರರು.

ಶಿವಮೊಗ್ಗ ಜಿಲ್ಲೆಯ ಪಶ್ಚಿಮ ಘಟ್ಟಗಳಲ್ಲಿನ ಹುಣಸೋಡು ಗ್ರಾಮದ ಬಳಿಯಲ್ಲಿ ನಡೆಯುತ್ತಿರುವ ಅಕ್ರಮ ಗಣಿಗಾರಿಕೆಗಾಗಿ ಸಂಗ್ರಹಿಸಿದ್ದ ಸ್ಫೋಟಕಗಳಿಂದ ಸಂಭವಿಸಿರುವ ದುರಂತದ ಕುರಿತು

### 03. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಚರ್ಚೆ

"2021ನೇ ಜನವರಿ, 28ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:29.01.2021ರಂದು **ಶ್ರೀ ಆಯನೂರು ಮಂಜುನಾಥ್** ರವರು ಸೂಚಿಸಿದ ಪ್ರಸ್ತಾವದ ಮೇಲೆ ಚರ್ಚೆ:

...2..

## 04. ಗಮನ ಸೆಳೆಯುವ ಸೂಚನೆಗಳು

೦1. **ಶ್ರೀ ಮರಿತಿಬ್ಬೇಗೌಡ** ಅವರು 2019 ರಿಂದ ಮಂಡ್ಯ ಜಿಲ್ಲಾ ಪಂಚಾಯಿತಿಯ ಸಾಮಾನ್ಯ ಸಭೆ ನಡೆಯದೆ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಸಮಗ್ರ ಅಭಿವೃದ್ಧಿ ಕಾರ್ಯಗಳು ಸಂಪೂರ್ಣವಾಗಿ ಸ್ಥಗಿತವಾಗಿರುವುದರಿಂದ ಸರ್ಕಾರದ ಯಾವುದೇ ಅನುದಾನ ಬಳಕೆಯಾಗಿಲ್ಲದಿರುವ ಕುರಿತು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

೦2. **ಶ್ರೀ ಪುಟ್ಟಣ್ಣ ಮತ್ತು ಶ್ರೀ ಮರಿತಿಬ್ಬೇಗೌಡ** ಅವರುಗಳು ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ 7ನೇ ಎ.ಐ.ಸಿ.ಟಿ.ಇ. ಪರಿಷ್ಕೃತ ವೇತನ ಶ್ರೇಣಿಯನ್ನು ಇದುವರೆವಿಗೂ ನೀಡದಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಉಪ ಮುಖ್ಯಮಂತ್ರಿಯವರು, ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

೦3. **ಶ್ರೀ ಕೆ.ಹರೀಶ್ ಕುಮಾರ್** ಅವರು ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ವಿಧಾನ ಪರಿಷತ್ತಿನ ಶಾಸಕರುಗಳನ್ನು ನಾಮನಿರ್ದೇಶನ ಮಾಡದಿರುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

## 05. ನಿಯಮ 330ರ ಮೇರೆಗೆ

೦1. **ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ ಮತ್ತು ಶ್ರೀ ಕೆ.ಟಿ. ಶ್ರೀಕಂಠೇಗೌಡ** ಅವರುಗಳು ದಿನಾಂಕ:10.06.2020ರಂದು ಆರ್ಥಿಕ ಇಲಾಖೆಯವರು ಹೊರಡಿಸಿರುವ ಸುತ್ತೋಲೆ ಸಂಖ್ಯೆ:ಆಇ/157/ವೆಚ8/2020ಯನ್ನು ಹಿಂಪಡೆದು ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವ ಹಾಗೂ ವೇತನಾನುದಾನಕ್ಕೆ ಒಳಪಡಿಸುವ ವಿಷಯದ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಕೆ.ಸಿ. ಕೊಂಡಯ್ಯ** ಅವರು ಹೈದ್ರಾಬಾದ್-ಕರ್ನಾಟಕ (ಕಲ್ಯಾಣ ಕರ್ನಾಟಕ) ಪ್ರದೇಶಾಭಿವೃದ್ಧಿ ಮಂಡಳಿಗೆ ಪ್ರತಿ ವರ್ಷ ಆಯವ್ಯಯದಲ್ಲಿ ಒದಗಿಸುತ್ತಿರುವ ಅನುದಾನ ಹಾಗೂ ಅದರ ಬಳಕೆ ಕುರಿತು ಪ್ರಸ್ತಾಪಿಸುವುದು.

೦3. **ಡಾ: ವೈ.ಎ. ನಾರಾಯಣಸ್ವಾಮಿ** ಅವರು ಕೋಲಾರ ಜಿಲ್ಲೆಯ ಕೆರೆಗಳಿಗೆ ಸಂಸ್ಕರಿಸಿದ ನೀರನ್ನು ತುಂಬಿಸಲು ರೂಪಿಸಿರುವ ಕೆ.ಸಿ.ವ್ಯಾಲಿ ಯೋಜನೆಯಡಿಯಲ್ಲಿ ನೂರಾರು ಕೋಟಿ ರೂಗಳನ್ನು ವೆಚ್ಚ ಮಾಡಿದ್ದರೂ ನಿರೀಕ್ಷಿತ ಪ್ರಮಾಣದಲ್ಲಿ ಕೆರೆಗಳಿಗೆ ನೀರನ್ನು ತುಂಬಿಸಲು ಆಗದಿರುವ ವಿಷಯದ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**